ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು

ಆ) ಇಲ್ಲ. ಈ ಬಗ್ಗೆ ಯಾವುದೇ ದೂರು ಬಂದಿಲ್ಲ.

ಇ) ಹೌದು

ಈ) ಪರಿಶೀಲಿಸಲಾಗುವುದು.

ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ಪುನರ್ವಸತಿ ಕೇಂದ್ರಗಳಲ್ಲಿ ಶಾಲೆಗಳ ಪ್ರಾರಂಭ

2514 (3375) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ವಿಜಾಪುರ ಜಿಲ್ಲೆ ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ಕೃಷ್ಣಾ ಮೇಲ್ಬಂಡೆ ಯೋಜನೆಯ ಹಿನ್ನೀರಿನಲ್ಲಿ ಮುಳುಗಡೆಯಾಗುವ ಪ್ರದೇಶಗಳ ಪುನರ್‌ವಸತಿ ಕೇಂದ್ರಗಳಿಗೆ ಸರ್ಕಾರ ಹೊಸದಾಗಿ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಶಿಕ್ಷಕರ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಮಂಜೂರಾತಿ ನೀಡಿದೆಯೇ?

ಆ) ಮಂಜೂರಾತಿ ನೀಡಿದ್ದಲ್ಲಿ ಎಂದಿನಿಂದ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು.

ಪ್ರಾಥಮಿಕ ಶಾಲೆ - 1

ಪ್ರೌಢ ಶಾಲೆಗಳು - 2

ಆ) 2001-2003 ನೇ ಶೈಕ್ಷಣಿಕ ವರ್ಷದಿಂದ

ಬಿಜಾಪುರ ಜಿಲ್ಲೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳ ಭರ್ತಿ

2515 (3376) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.